**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸಿಜೆಎಂ, ರಾಯಚೂರು**
**ಸಿ.ಸಿ.ನಂಬರು.3963/2021**

**CW-9 /PW-9**

| | | |
|---|---|---|
| ಸಾಕ್ಷಿದಾರನ ಹೆಸರು | ಃ | ತಾಯಪ್ಪ |
| ತಂದೆಃ ಹೆಸರು | ಃ | ತಾಯಪ್ಪ |
| ವಯಸ್ಸು | ಃ | 38 |
| ಉದ್ಯೋಗ | ಃ | ವ್ಯಾಪಾರ |
| ವಿಳಾಸ | ಃ | ರಾಯಚೂರು |

**ಮುಖ್ಯ ವಿಚಾರಣೆ ಅಬಿಯೋಜನೆ ಪರ ಮಾನ್ಯ ಹಿರಿಯ ಸ.ಸ.ಅ.ಅವರಿಂದ**
**ಪ್ರಮಾಣೀಕರಿಸಿದ ದಿನಾಂಕಃ 25-01-2025**

ಚಾಸಾ-1, 4 ರಿಂದ 7 ಮತ್ತು ಆರೋಪಿತರು ಗೊತ್ತು. ಪ್ರಕರಣದ ಬಗ್ಗೆ ನನಗೇನು ಗೊತ್ತಿಲ್ಲ. ಪೋಲಿಸರಿಗೆ ಯಾವುದೇ ಹೇಳಿಕೆ ನೀಡಿಲ್ಲ. ಪೋಲಿಸರು ನನ್ನನ್ನು ವಿಚಾರಣೆ ಮಾಡಿಲ್ಲ. ನಾನು ಯಾವುದೇ ಜಗಳವನ್ನು ನೋಡಿಲ್ಲ, ಬಿಡಿಸಿಲ್ಲ.

(**ಈ ಹಂತದಲ್ಲಿ ಮಾನ್ಯ** ಹಿರಿಯ **ಎಪಿಪಿ ಅವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಅನುಮತಿ ಕೋರಿದ್ದರಿಂದ ಅನುಮತಿಯನ್ನು ಕೊಡಲಾಯಿತು.**)

**ಪಾಟೀ ಸವಾಲುಃ** ಮಾನ್ಯ ಹಿರಿಯ ಎಪಿಪಿ ಅವರಿಂದಃ

ದಿನಾಂಕ 21.03.2021 ರಂದು ಮಧ್ಯಾಹ್ನ 12 ಗಂಟೆಗೆ ನಾನು ಚಾಸಾ-1, 7 ಮನೆಯಲ್ಲಿ ಇದ್ದಾಗ ಆರೋಪಿತರು ಅಲ್ಲಿಗೆ ಬಂದು ಮನೆಯ ಪಕ್ಕದ ಜಾಗೆಯ ವಿಷಯವಾಗಿ ಚಾಸಾ-1 ರವರ ಜೊತೆ ಜಗಳ ಶಬ್ದ ಕೇಳಿ ಮನೆಯಿಂದ ಹೊರ ಬಂದಾಗ 1 ನೇ ಆರೋಪಿ ಚಾಸಾ-1 ರವರ ತಲೆಗೆ ಕಟ್ಟಿಗೆಯಿಂದ ಹೊಡೆದು ಭಾರಿ ಒಳಪೆಟ್ಟು ಮಾಡಿದನು ಎಂದರೆ ಸರಿಯಲ್ಲ. 2 ನೇ ಆರೋಪಿ ಚಾಸಾ-1 ರವರನ್ನು ಗಟ್ಟಿಯಾಗಿ ಹಿಡಿದು ತಡೆದು ನಿಲ್ಲಿಸಿದನು ಎಂದರೆ ಸರಿಯಲ್ಲ. 3 ನೇ ಆರೋಪಿ ಕೈಗಳಿಂದ ಬೆನ್ನಿಗೆ ಹೊಡೆದು ಒಳಪೆಟ್ಟು ಮಾಡಿರುತ್ತಾನೆ ಎಂದರೆ ಸರಿಯಲ್ಲ. 2 ನೇ ಆರೋಪಿ ಕೈಗಳಿಂದ ಚಾಸಾ-1 ರವರ ಕಪಾಳಕ್ಕೆ ಹೊಡೆದುತ್ತಾನೆ ಎಂದರೆ ಸರಿಯಲ್ಲ. ಆರೋಪಿತರು ಎಲ್ಲರೂ ಸೇರಿ ಚಾಸಾ-1 ರವರಿಗೆ ಇನ್ನೊಮ್ಮೆ ಸಿಕ್ಕರೇ ಜೀವ ಸಹಿತ ಬಿಡುವುದಿಲ್ಲ ಎಂದು ಜೀವದ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ, ಜಗಳವನ್ನು ನಾನು ಚಾಸಾ-1, 4, 7 ಮತ್ತು 8 ರವರು ಬಿಡಿಸಿರುತ್ತೇವೆ ಎಂದರೆ ಸರಿಯಲ್ಲ. ಮೇಲೆ ಹೇಳಿದಂತೆ ನಾನು ಪೋಲಿಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ನಿರಾಕರಿಸಿದ ಹೇಳಿಕೆಯನ್ನು ನಿಪಿ-9 ಎಂದು ಗುರುತಿಸಲಾಯಿತು. ನನಗೆ ಪ್ರಕರಣದ ಬಗ್ಗೆ ಎಲ್ಲ ಗೊತ್ತಿದ್ದರು ಜಗಳವನ್ನು ನಾನು ಪ್ರತ್ಯಕ್ಷವಾಗಿ ನೋಡಿ ಬಿಡಿಸಿದ್ದರು

ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇರುವುದಿಲ್ಲ.

**ಮರು ವಿಚಾರಣೆ - ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ್ತಲೇಖನೆ ಮೇರೆಗೆ ಬೆರಳಚ್ಚುಗಾರರು ಬೆರಳಚ್ಚು ಮಾಡಿರುತ್ತಾರೆ ಮತ್ತು ಅದನ್ನು ಸಾಕ್ಷಿಗೆ ಓದಿ ತಿಳಿಸಿ ಹೇಳಿದಾಗ ಸಾಕ್ಷಿ ಸರಿ ಇದೆ ಅಂತಾ ಒಪ್ಪಿಕೊಂಡಿರುತ್ತಾರೆ.)

**ಪ್ರಧಾನ ಹಿರಿಯ ಸಿ.ಜೆ ಮತ್ತು ಸಿಜೆಎಂ, ರಾಯಚೂರು.**